RNU AIR DHARWAD

JULY 12, 2026

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಪ್ರಸಿದ್ಧ ಹಿನ್ನೆಲೆ ಗಾಯಕಿ ಎಸ್. ಜಾನಕಿ ಅವರ ನಿಧನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಮಂತ್ರಿ ನರೇಂದ್ರ ಮೋದಿ, ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಸೇರಿದಂತೆ ಅನೇಕ ಗಣ್ಯರು ಕಂಬನಿ ಮಿಡಿದಿದ್ದು, ಸಂತಾಪ ಸೂಚಿಸಿದ್ದಾರೆ. ಪ್ರಸ್ತುತ ಮೈಸೂರು ಮಹಾರಾಜ ಕಾಲೇಜು ಮೈದಾನದಲ್ಲಿ, ಪಾರ್ಥಿವ ಶರೀರದ ಸಾರ್ವಜನಿಕ ದರ್ಶನಕ್ಕಾಗಿ ವ್ಯವಸ್ಥೆ ಮಾಡಲಾಗಿದೆ. ಅಭಿಮಾನಿಗಳು, ಗಣ್ಯರು ಅಂತಿಮ ದರ್ಶನ ಪಡೆದು, ಗೌರವ ನಮನಗಳನ್ನು ಸಲ್ಲಿಸುತ್ತಿದ್ದಾರೆ. ಕನ್ನಡ ಭಾ ೆ ಮತ್ತು ಸಾಹಿತ್ಯದೊಂದಿಗೆ ಅವಿನಾಭಾವ ಸಂಬಂಧ ಹೊಂದಿದ್ದ, ಎಸ್. ಜಾನಕಿ ಅವರ ಗಾಯನ, ತಲೆಮಾರುಗಳ ಕಾಲ ಸಂಗೀತ ಪ್ರೇಮಿಗಳನ್ನು ಮಂತ್ರಮುಗ್ಧಗೊಳಿಸಿತ್ತು ಎಂದು ಮಾಜಿ ಪ್ರಧಾನಮಂತ್ರಿ ಹೆಚ್.ಡಿ ದೇವೇಗೌಡ ಹೇಳಿದ್ದಾರೆ. ಭಗವಂತನು ಮೃತರ ಆತ್ಮಕ್ಕೆ ಸದ್ಗತಿ ಕರುಣಿಸಲಿ, ಕುಟುಂಬವರ್ಗ ಮತ್ತು ಅಭಿಮಾನಿಗಳಿಗೆ ಅವರ ಅಗಲಿಕೆಯ ದುಃಖವನ್ನು ಭರಿಸುವ ಶಕ್ತಿ ನೀಡಲಿ ಎಂದು ತಮ್ಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ. ಇಂದು ಸಂಜೆ, 4.30 ಕ್ಕೆ, ಮೈಸೂರು ಬೋಗಾದಿ ರಸ್ತೆಯ, ಕಣಿಯನಹುಂಡಿ ಬಳಿಯಿರುವ ಅವರ ತೋಟದ ಮನೆ ಸಮೀಪ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಸಂಸ್ಕಾರ ನೆರವೇರಲಿದೆ.

<><><>

ಇಂದು, ಕರ್ನಾಟಕ ಏಕೀಕರಣದ ಪ್ರಮುಖ ರೂವಾರಿ, ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಅವರ ಜನ್ಮದಿನ. ಕನ್ನಡಿಗರನ್ನು ಒಗ್ಗೂಡಿಸಿ, ಕನ್ನಡ ಭಾಷೆ, ಸಂಸ್ಕೃತಿ ಹಾಗೂ ನಾಡಿನ ಅಸ್ಮಿತೆಯನ್ನು ಜಾಗೃತಗೊಳಿಸಲು ಆಲೂರು ವೆಂಕಟರಾವ್ ಅವರು ನೀಡಿದ ಕೊಡುಗೆ ಅನನ್ಯವಾದುದು ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಸ್ಮರಿಸಿದ್ದಾರೆ.

<><><>

ರಾಜ್ಯದ ಗ್ರಾಮ ಪಂಚಾಯಿತಿಗಳ, ಆಡಳಿತಾವಧಿ ಪೂರ್ಣಗೊಂಡಿದ್ದು, ಬರುವ ಅಕ್ಟೋಬರ್ ಅಥವಾ ನವೆಂಬರ್‌ನಲ್ಲಿ, ಚುನಾವಣೆ ನಡೆಯಲಿದೆ ಎಂದು, ಪಂಚಾಯಿತಿ ರಾಜ್ ಖಾತೆ ಸಚಿವ, ಈಶ್ವರ ಖಂಡ್ರೆ ತಿಳಿಸಿದ್ದಾರೆ. ಬೆಂಗಳೂರಿನ ವಿಕಾಸಸೌಧದ, ತಮ್ಮ ಕಚೇರಿಯಲ್ಲಿ ಸಚಿವರು ಸುದ್ದಿಗೋಷ್ಠಿ ನಡೆಸಿ, ಕೆಲವು ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸಿದ ಹಿನ್ನೆಲೆ, ಕ್ಷೇತ್ರ ಪುನರ್ ವಿಂಗಡಣೆ ಮಾಡಬೇಕಾಗಿದೆ. ಈ ತಿಂಗಳಾಂತ್ಯ ಅಥವಾ ಆಗಸ್ಟ್‌ನಲ್ಲಿ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ, ಮೀಸಲಾತಿ ನಿರ್ಧರಿಸಿ, ರಾಜ್ಯ ಚುನಾವಣಾ ಆಯೋಗಕ್ಕೆ ಸಲ್ಲಿಸಲಾಗುವುದು. ಆ ಬಳಿಕ, ಆಯೋಗ, 45 ದಿನಗಳಲ್ಲಿ, ಪಂಚಾಯಿತಿಗಳ ಚುನಾವಣೆ ನಡೆಸಲಿದೆ, ಎಂದು ಸ್ಪಷ್ಟ ಪಡಿಸಿದರು.

<><><>

ಹಾವೇರಿ ಜಿಲ್ಲೆ, ಎಲ್ಲ ನ್ಯಾಯಾಲಯಗಳಲ್ಲಿ ಆಯೋಜಿತ, ರಾಷ್ಟ್ರೀಯ ಲೋಕ ಅದಾಲತ್ ನಲ್ಲಿ, ಒಟ್ಟು 6 ಸಾವಿರದ 28 ಪ್ರಕರಣಗಳಲ್ಲಿ, 4 ಸಾವಿರದ 565 ಪ್ರಕರಣಗಳು ಇತ್ಯರ್ಥಗೊಂಡಿದ್ದು, 20 ಕೋಟಿ 61 ಲಕ್ಷ ರೂಪಾಯಿ ರಾಜಿಯಾಗಿದೆ. ಜಿಲ್ಲೆಯಲ್ಲಿ ವ್ಯಾಜ್ಯ ಪೂರ್ವ, 1 ಲಕ್ಷ 14 ಸಾವಿರದ 449 ಪ್ರಕರಣಗಳು ಇತ್ಯರ್ಥಗೊಂಡಿವೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ, ಬಿರಾದಾರ ದೇವಿಂದ್ರಪ್ಪಾ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

<><><>

ಬಿರಾದಾರ ದೇವಿಂದ್ರಪ್ಪಾ ಧ್ವನಿ– 43 ಸೆಕೆಂದುಗಳು

<><><>

ಯಾದಗಿರಿ ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ, ಆಯೋಜಿತ ರಾಷ್ಟ್ರೀಯ ಲೋಕ ಅದಾಲತ್ ನಲ್ಲಿ, ರಾಜೀ ಸಂಧಾನದ ಮೂಲಕ 7 ಸಾವಿರದ 237 ಪ್ರಕರಣಗಳು ಇತ್ಯರ್ಥಗೊಂಡಿವೆ. ಪ್ರಕರಣಗಳ ತ್ವರಿತ ವಿಲೇವಾರಿಗಾಗಿ ಜಿಲ್ಲೆಯಾದ್ಯಂತ 11 ಪೀಠಗಳನ್ನು ರಚಿಸಲಾಗಿತ್ತು.

<><><>

ವಿಜಯಪುರ ಜಿಲ್ಲೆಯಲ್ಲಿ, ವಿವಿಧ ನ್ಯಾಯಾಲಯಗಳಲ್ಲಿ ವಿಚಾರಣೆ ಹಂತದಲ್ಲಿದ್ದ, ಪ್ರಕರಣಗಳು ಸೇರಿದಂತೆ ಒಟ್ಟು 16 ಸಾವಿರದ 678 ಪ್ರಕರಣಗಳು ರಾಜೀ ಸಂಧಾನದ ಮೂಲಕ ಇತ್ಯರ್ಥಗೊಂಡಿವೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹರೀಶ. ಎ ತಿಳಿಸಿದ್ದಾರೆ.

<><><>

ರಾಜ್ಯದ ಶೇಕಡ 50ಕ್ಕೂ ಹೆಚ್ಚು ತಾಲೂಕುಗಳಲ್ಲಿ, ಬರಗಾಲ ಭೀಕರವಾಗಿದೆ. ಸರ್ಕಾರದ ಮುಂದೆ, ಯಾವುದೇ ಪರಿಹಾರ ಯೋಜನೆ ಇಲ್ಲ ಎಂದು, ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಸಂಸದ, ಬಸವರಾಜ ಬೊಮ್ಮಾಯಿ, ಟೀಕಿಸಿದ್ದಾರೆ. ಗದಗನಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಮುಂಗಾರು ವಿಫಲವಾದಾಗ, ಪರ್ಯಾಯ ಬೆಳೆ ಯೋಜನೆ ರೂಪಿಸಬೇಕಿತ್ತು. ರೈತರಿಗೆ ಸೂಕ್ತ ಸಲಹೆ ಅಥವಾ ಮಾರ್ಗದರ್ಶನ, ಸರ್ಕಾರದ ವಿವಿಧ ಇಲಾಖೆಗಳಿಂದ ಸಿಗುತ್ತಿಲ್ಲ. ರೈತರು ಬೀಜ ಹಾಗೂ ರಸ ಗೊಬ್ಬರಗಳಿಗೆ ಬಂಡವಾಳ ಹಾಕಿ, ಈಗ ತೀವ್ರ ಹತಾಶರಾಗಿದ್ದಾರೆ, ಎಂದರು. ತಳಮಟ್ಟದ ವಾಸ್ತವ ಪರಿಸ್ಥಿತಿಗೆ ಅನುಗುಣವಾಗಿ ಕಾರ್ಯಯೋಜನೆ, ತುರ್ತಾಗಿ ರೂಪಿಸುವಂತೆ, ಸಂಸದ ಬೊಮ್ಮಾಯಿ ಆಗ್ರಹಿಸಿದ್ದಾರೆ.

<><><>

ಯಾದಗಿರಿ ಜಿಲ್ಲೆಯಲ್ಲಿ ಮುಂಗಾರು ಮಳೆ ದುರ್ಬಲವಾಗಿರುವ ಹಿನ್ನೆಲೆ, ರೈತರು ತೇವಾಂಶ ಸಂರಕ್ಷಣಾ ಕ್ರಮಗಳಿಗೆ ಆದ್ಯತೆ ನೀಡಬೇಕು, ನೀರಿನ ಕೊರತೆ ಇರುವ ಪ್ರದೇಶಗಳಲ್ಲಿ ನವಣೆ, ಜೋಳ ಹಾಗೂ ಸಜ್ಜೆಯಂತಹ ಕಡಿಮೆ ನೀರು ಬೇಡುವ ಬೆಳೆಗಳನ್ನು ಬೆಳೆಸುವುದು ಸೂಕ್ತ ಎಂದು ಕೃಷಿ ಇಲಾಖೆ, ಜಂಟಿ ನಿರ್ದೇಶಕ ರತೇಂದ್ರನಾಥ ಸುಗೂರ ಸಲಹೆ ನೀಡಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ